ಕರ್ನಾಟಕ ಧನವಿನಿಯೋಗ (ಸಂಖ್ಯೆ 3) ವಿಧೇಯಕ, 2009

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಬಿ.ಎಸ್.ಯಡಿಯೂರಪ್ಪ (ಮುಖ್ಯಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, "2009ರ ಕರ್ನಾಟಕ ಧನ ವಿನಿಯೋಗ (ಸಂಖ್ಯೆ 3) ವಿಧೇಯಕವನ್ನು" ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಅಧ್ಯಕ್ಷರು : ಪ್ರಸ್ತಾವ ಏನೆಂದರೆ;

"2009ರ ಕರ್ನಾಟಕ ಧನವಿನಿಯೋಗ (ಸಂಖ್ಯೆ 3) ವಿಧೇಯಕವನ್ನು ಪರ್ಯಾಲೋಚಿಸುವುದು".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ–ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2 ರಿಂದ 3ರವರೆಗೆ

ಅಧ್ಯಕ್ಷರು : "ಖಂಡ 2 ರಿಂದ 3ರವರೆಗೆ ಎರಡೂ ಸೇರಿದಂತೆ" ಈ ವಿಧೇಯಕದ ಅಂಗವಾಗಿರುತ್ತದೆ.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ರಿಂದ 3ರವರೆಗೆ ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲಾಯಿತು)

ಖಂಡ 1 ಇತ್ಯಾದಿ :

ಅಧ್ಯಕ್ಷರು : ಪ್ರಸ್ತಾವ ಏನೆಂದರೆ;

"ಮೊದಲನೇ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಬಿ.ಎಸ್.ಯಡಿಯೂರಪ್ಪ (ಮುಖ್ಯಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, "2009ರ ಕರ್ನಾಟಕ ಧನ ವಿನಿಯೋಗ (ಸಂಖ್ಯೆ 3) ವಿಧೇಯಕವನ್ನು" ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ;

"2009ರ ಕರ್ನಾಟಕ ಧನ ವಿನಿಯೋಗ (ಸಂಖ್ಯೆ 3) ವಿಧೇಯಕವನ್ನು ಅಂಗೀಕರಿಸುವುದು".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು

3. ಕರ್ನಾಟಕ ವಿಧಾನ ಮಂಡಲದವರ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕ, 2009

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎಸ್.ಸುರೇಶ್‌ಕುಮಾರ್ (ಕಾನೂನು ಮತ್ತು ಸಂಸದೀಯ-ವ್ಯವಹಾರಗಳ ಸಚಿವರು) : ಮಾನ್ಯ ಅಧ್ಯಕ್ಷರೆ, **"2009 ರ ಕರ್ನಾಟಕ ವಿಧಾನ ಮಂಡಲದವರ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕವನ್ನು"** ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, **"2009ರ ಕರ್ನಾಟಕ ವಿಧಾನ ಮಂಡಲದವರ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕವನ್ನು"** ಮಂಡಿಸಲು ಅನುಮತಿ ನೀಡುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು